ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ನಂ.17, ವಾರ್ತಾ ಸೌಧ, ಭಗವಾನ್ ಮಹಾವೀರ ರಸ್ತೆ ಬೆಂಗಳೂರು 560 001.
ದೂ. 080-22028032/34/ಫ್ಯಾಕ್ಸ್ 22028041

ದಿನಾಂಕ : 18-03-2015

# ಪತ್ರಿಕಾ ಪ್ರಕಟಣೆ

## ಕುಷ್ಠರೋಗವನ್ನು ಪ್ರಾರಂಭಿಕ ಹಂತದಲ್ಲೇ ಗುರುತಿಸಿ ಚಿಕಿತ್ಸೆ ನೀಡಿದಲ್ಲಿ ರೋಗ ಗುಣ ಪಡಿಸಬಹುದು- ಸಚಿವ ಆರ್.ರೋಷನ್ ಬೇಗ್

ಬೆಂಗಳೂರು, ಮಾರ್ಚ್ 18, (ಕರ್ನಾಟಕ ವಾರ್ತೆ):

ಕುಷ್ಠರೋಗವನ್ನು ಪ್ರಾರಂಭದ ಹಂತದಲ್ಲೇ ಗುರುತಿಸಿ ಕ್ರಮಬದ್ಧವಾಗಿ ಚಿಕಿತ್ಸೆ ನೀಡಿದಲ್ಲಿ ಈ ರೋಗವನ್ನು ತಡೆಗಟ್ಟಬಹುದು ಎಂದು ಮೂಲಸೌಲಭ್ಯ ಅಭಿವೃದ್ಧಿ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಹಾಗೂ ಹಜ್ ಸಚಿವ ಆರ್.ರೋಷನ್ ಬೇಗ್ ತಿಳಿಸಿದರು.

ವಿಧಾನಸೌಧದ ಸಮ್ಮೇಳನ ಸಭಾಂಗಣದಲ್ಲಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು ಹಾಗೂ ಕುಷ್ಠರೋಗ ನಿರ್ಮೂಲನಾ ಸಂಸ್ಥೆ ಇವರು ಏರ್ಪಡಿಸಿದ್ದ 'ಬೆಳಕಿನೆಡೆಗೆ-ಬದುಕು' ಕಾರ್ಯಕ್ರಮವನ್ನು ದೀಪ ಬೆಳಗಿಸುವ ಮೂಲಕ ಉದ್ಘಾಟಿಸಿ ಮಾತನಾಡಿದ ಸಚಿವರು ಕುಷ್ಠರೋಗಿಗಳು ಸಮಾಜದಲ್ಲಿ ಇತರರಂತೆ ಜೀವನ ನಡೆಸಲು ಅವಕಾಶ ಕಲ್ಪಿಸುವುದು ನಮ್ಮೆಲ್ಲರ ಜವಬ್ದಾರಿಯಾಗಿದೆ ಎಂದರು.

ಕುಷ್ಠ ರೋಗವನ್ನು ಪ್ರಾರಂಭಿಕ ಹಂತದಲ್ಲಿ ಗುರುತಿಸಿ ಚಿಕಿತ್ಸೆ ನೀಡಿದಲ್ಲಿ ಅಂಗವಿಕಲತೆಯನ್ನು ತಡೆಗಟ್ಟಬಹುದು ಎಂದು ಮಾತನಾಡಿದ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಸಚಿವ ಯು.ಟಿ.ಖಾದರ್ ಅವರು ರೋಗದಿಂದ ಗುಣಮುಖವಾಗಿ ಸರ್ಕಾರಿ ಸೇವೆಗೆ ಸೇರುತ್ತಿರುವ ನೀವುಗಳು ನಿಮ್ಮಂತೆ ರೋಗದಿಂದ ಬಳಲುತ್ತಿರುವ ರೋಗಿಗಳಿಗೆ ಹೆಚ್ಚಿನ ಅರಿವು, ಚಿಕಿತ್ಸೆ ನೀಡುವಂತೆ ಕರೆ ನೀಡಿದರು.

ಕುಷ್ಠರೋಗದಿಂದ ಗುಣಮುಖರಾಗಿರುವವರಿಗೆ ಸರ್ಕಾರಿ ಸೇವೆ ನೀಡುತ್ತಿರುವುದು ಪ್ರಗತಿದಾಯಕ ವಿಷಯ ಎಂದು ಮಾತನಾಡಿದ ವೈದ್ಯಕೀಯ ಶಿಕ್ಷಣ ಸಚಿವ ಶರಣಪ್ರಕಶ್ ಪಾಟೀಲ್ ಅವರು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ವೈದ್ಯರು ಹಾಗೂ ಸಿಬ್ಬಂದಿಗಳು ಕುಷ್ಠರೋಗ ಉಲ್ಬಣವಾಗಲು ಬಿಡದೆ ಪ್ರಾರಂಭಲ್ಲೆ ಅಗತ್ಯ ಚಿಕಿತ್ಸೆ ನೀಡಿದಲ್ಲಿ ಈ ರೋಗದಿಂದ ಬಳಲುತ್ತಿರುವವರು ಸಂಪೂರ್ಣ ಗುಣಮುಖರಾಗುತ್ತಾರೆ ಎಂದರು.

ಕುಷ್ಠ ರೋಗದಿಂದ ಗುಣಮುಖರಾಗಿ ಸರ್ಕಾರಿ ಸೇವೆಗೆ ಸೇರುತ್ತಿರುವ 100 ಮಂದಿಗೆ ಸಚಿವರುಗಳಾದ ಆರ್.ರೋಷನ್ ಬೇಗ್, ಯು.ಟಿ.ಖಾದರ್, ಶರಣಪ್ರಕಾಶ್ ಪಾಟೀಲ್ ಅವರುಗಳು ಪ್ರಮಾಣ ಪತ್ರ ನೀಡಿದರು.

ಕುಷ್ಠ ರೋಗ ನಿರ್ಮೂಲನೆಗೆ ಸೇವೆಸಲ್ಲಿಸುತ್ತಿರುವ ಸಂಘ ಸಂಸ್ಥೆಗಳ ಗಣ್ಯರನ್ನು ಇದೇ ಸಂದರ್ಭದಲ್ಲಿ ಗೌರವಿಸಲಾಯಿತು.

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಪ್ರಧಾನ ಕಾರ್ಯದರ್ಶಿ ಅತುಲ್ ಕುಮಾರ್ ರೂವಾರಿ, ಆರೋಗ್ಯ ಇಲಾಖೆಯ ನಿರ್ದೇಶಕ ಡಾ.ಅರುಣ, ರವೀಂದ್ರ, ಆಯುಷ್‌ನ ನಿರ್ದೇಶಕರು, ಸಂಘ ಸಂಸ್ಥೆಗಳ ಪದಾಧಿಕಾರಿಗಳು, ಗಣ್ಯರು ಸಮಾರಂಭದಲ್ಲಿ ಉಪಸ್ಥಿತರಿದ್ದರು.

ಬಾಬು: ಕೆ.ಪಿ.ಪಿ/ಸೌಮ್ಯ

## ನೇಮಕ

ಬೆಂಗಳೂರು, ಮಾರ್ಚ್ 18, (ಕರ್ನಾಟಕ ವಾರ್ತೆ):

ಶ್ರೀಮತಿ ವಿಜಯಲಕ್ಷ್ಮೀ ಅರಸ್, ಅಧ್ಯಕ್ಷರು, ಶ್ರೀ ಕಂಠೀರವ ಸ್ಟುಡಿಯೋ ನಿಯಮಿತ ಇವರನ್ನು ತಕ್ಷಣದಿಂದ ಜಾರಿಗೆ ಬರುವಂತೆ ಹಾಗೂ ಮುಂದಿನ ಆದೇಶದವರೆಗೆ ಶ್ರೀ ಕಂಠೀರವ ಸ್ಟುಡಿಯೋ ನಿಯಮಿತದ ನಿರ್ದೇಶಕರ ಮಂಡಳಿಗೆ ನಾಮ ನಿರ್ದೇಶನ ಮಾಡಿ, ನಿರ್ದೇಶಕರ ಮಂಡಳಿಯ ಅಧ್ಯಕ್ಷರನ್ನಾಗಿ ನೇಮಿಸಿ ಸರ್ಕಾರ ಆದೇಶಿಸಿದೆ.

ಬಾಬು: ಸೌಮ್ಯ

## ಆಹಾರ ಧಾನ್ಯ ಖರೀದಿ ಅವಧಿ ವಿಸ್ತರಣೆ

ಬೆಂಗಳೂರು, ಮಾರ್ಚ್ 18, (ಕರ್ನಾಟಕ ವಾರ್ತೆ):

2014-15 ನೇ ಸಾಲಿನ ಬೆಂಬಲ ಬೆಲೆ ಯೋಜನೆಯಡಿ ಬೆಂಗಳೂರು ನಗರ ಮತ್ತು ಬೆಂಗಳೂರು ಗ್ರಾಮಾಂತರ ಜಿಲ್ಲೆಗಳಲ್ಲಿ ರಾಗಿ ಬೆಳೆಗಳಿಗೆ ಈಗಾಗಲೇ ತೆರೆಯಲಾಗಿರುವ ಖರೀದಿ ಕೇಂದ್ರಗಳಲ್ಲಿ ಖರೀದಿ ಮುಕ್ತಾಯದ ದಿನಾಂಕವನ್ನು 31-3-2015 ರವರೆಗೆ ವಿಸ್ತರಿಸಲಾಗಿದೆ. ಆದ ಕಾರಣ ಜಿಲ್ಲೆಯ ಎಲ್ಲಾ ರೈತ ಬಾಂಧವರು ನಿಗಧಿತ ಅವಧಿಯೊಳಗೆ ಈ ಯೋಜನೆಯ ಪ್ರಯೋಜನವನ್ನು ಪಡೆಯಲು ಕೋರಿದೆ. ಧಾನ್ಯ ಸಂಗ್ರಹಣಾ ಖರೀದಿಗೆ ಮುಕ್ತಾಯ ದಿನಾಂಕವನ್ನು ಮತ್ತೆ ವಿಸ್ತರಿಸಲಾಗಿರುವುದಿಲ್ಲವೆಂದು ಕೃಷಿ ಇಲಾಖೆ ಪ್ರಕಟಣೆ ತಿಳಿಸಿದೆ.

ಬಾಬು: ಸೌಮ್ಯ

## ಮರುನಾಮಕರಣ

**ಬೆಂಗಳೂರು, ಮಾರ್ಚ್ 18, (ಕರ್ನಾಟಕ ವಾರ್ತೆ):**

ಕರ್ನಾಟಕ ರಾಜ್ಯ ಗಿರಿಜನ ಸಂಶೋಧನಾ ಸಂಸ್ಥೆಯನ್ನು ಕರ್ನಾಟಕ ರಾಜ್ಯ ಬುಡಕಟ್ಟು ಸಂಶೋದನಾ ಸಂಸ್ಥೆ ಎಂದು ಮರು ನಾಮಕರಣ ಮಾಡಿ ಸರ್ಕಾರ ಆದೇಶ ಹೊರಡಿಸಿದೆ.

ಬಾಬು: ಸೌಮ್ಯ

## ಸಮಿತಿ ರಚನೆ

**ಬೆಂಗಳೂರು, ಮಾರ್ಚ್ 16, (ಕರ್ನಾಟಕ ವಾರ್ತೆ)**

ಸಂವಿದಾನ ಶಿಲ್ಪಿ ಡಾ|| ಬಾಬಾ ಸಾಹೇಬ್ ಅಂಬೇಡ್ಕರ್ ಅವರ ಹೆಸರಿನಲ್ಲಿ ರಾಜ್ಯ ಸರ್ಕಾರದ ಸಮಾಜ ಕಲ್ಯಾಣ ಇಲಾಖೆ ನೀಡುವ ವಾರ್ಷಿಕ ಪ್ರಶಸ್ತಿಗಳಿಗೆ 2015-16 ನೇ ಸಾಲಿಗೆ ಆಯ್ಕೆ ಮಾಡಲು ಡಾ|| ಸಿದ್ಧಲಿಂಗಯ್ಯ ಅವರ ಅಧ್ಯಕ್ಷತೆಯಲ್ಲಿ ಸಮಿತಿ ರಚಿಸಿದೆ. ಸಮಿತಿಯಲ್ಲಿ ಶ್ರೀಮತಿ ಇಂದಿರಾ ಕೃಷ್ಣಪ್ಪ, ಪ್ರೊ|| ಎ.ಕೆ.ಹಂಪಣ್ಣ, ಡಾ|| ದುರ್ಗಾದಾಸ್, ಲಕ್ಷ್ಮೀನಾರಾಯಣ ನಾಗವಾರ ಅವರನ್ನು ಸದಸ್ಯರನ್ನಾಗಿ ನೇಮಿಸಿದ್ದು, ಸಮಾಜ ಕಲ್ಯಾಣ ಇಲಾಖೆಯ ಆಯುಕ್ತರು ಸದಸ್ಯ ಕಾರ್ಯದರ್ಶಿಗಳಾಗಿರುತ್ತಾರೆ ಎಂದು ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವಾಲಯ ಪ್ರಕಟಣೆ ತಿಳಿಸಿದೆ.

ಬಾಬು: ಸೌಮ್ಯ: ಪ.ಹೊಸ